,.,.€ ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015-16 ದಿನಾಂಕ: 19-07-2016

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | "ಕನ್ನಡ ಮತ್ತು ಸಂಸ್ಕೃತಿ ಯುವಜನೋತ್ಸವ"<br><br>ಉದ್ಘಾಟನೆ<br><br>ಡಾ. ಎಲ್. ಹನುಮಂತಯ್ಯ, ಅಧ್ಯಕ್ಷರು,<br>ಕನ್ನಡ ಅಭಿವೃದ್ಧಿ ಪ್ರಾಧಿಕಾರ<br><br>ಅಧ್ಯಕ್ಷತೆ:<br><br>ಅಲ್ಹಾಜ್ ಮಕ್ಬೂಲ್ ಅಹ್ಮದ್ ಸಾಹೇಬ್, ಸೆಂಟ್ರಲ್ ಮುಸ್ಲಿಂ ಅಸೋಸಿಯೇಷನ್ ಆಫ್ ಕರ್ನಾಟಕ, ಬೆಂಗಳೂರು.<br><br>ಮುಖ್ಯ ಅತಿಥಿ:<br><br>ಡಾ. ಜಹೀರುದ್ದೀನ್ ಅಹ್ಮದ್,<br><br>ಕಾರ್ಯದರ್ಶಿಗಳು,<br>ಸೆಂಟ್ರಲ್ ಮುಸ್ಲಿಂ ಅಸೋಸಿಯೇಷನ್ ಆಫ್ ಕರ್ನಾಟಕ, ಬೆಂಗಳೂರು. | 20-07-2016<br>ಬುಧವಾರ<br><br>ಬೆಳಿಗ್ಗೆ<br>11-30 ಗಂಟೆಗೆ | ಅಬ್ಬಾಸ್ ಖಾನ್ ಮಹಿಳಾ ಕಾಲೇಜು, ಬೆಂಗಳೂರು. |

ನಿರ್ದೇಶಕರ ಪರವಾಗಿ

<u>ಪತ್ರಿಕಾ ಪ್ರಕಟಣೆ</u>

# ಸಚಿವ ಸಂಪುಟ ಸಭೆ

**ಬೆಂಗಳೂರು, ಜುಲೈ 19 (ಕರ್ನಾಟಕ ವಾರ್ತೆ)**

**ರಾಜ್ಯ ಸಚಿವ ಸಂಪುಟದ ಸಭೆಯನ್ನು ಜುಲೈ 20 ರಂದು ಬೆಳಿಗ್ಗೆ 11-00 ಗಂಟೆಗೆ ವಿಧಾನಸೌಧದ ಮೂರನೇ ಮಹಡಿಯಲ್ಲಿರುವ ಸಚಿವರ ಸಂಪುಟ ಸಭಾಮಂದಿರದಲ್ಲಿ ಕರೆಯಲಾಗಿದೆ**

ಬಾಬು:ಜಿಪಿಆರ್.

# ಬಡ್ತಿ, ನೇಮಕ

**ಬೆಂಗಳೂರು, ಜುಲೈ 19 (ಕರ್ನಾಟಕ ವಾರ್ತೆ)**

**ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯದರ್ಶಿ ಹುದ್ದೆಗೆ ಶ್ರೀನಿವಾಸ್ ಅವರಿಗೆ ಬಡ್ತಿ ನೀಡಿ ನೇಮಕ ಮಾಡಲಾಗಿದೆ.**

ಬಾಬು:ಜಿಪಿಆರ್.

# ವಿದ್ಯಾರ್ಥಿ ವೇತನಕ್ಕೆ ಅರ್ಜಿ

**ಬೆಂಗಳೂರು, ಜುಲೈ 19 (ಕರ್ನಾಟಕ ವಾರ್ತೆ)**

**ಕೇಂದ್ರ ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯ, ಉನ್ನತ ಶಿಕ್ಷಣ ಇಲಾಖೆ, ನವದೆಹಲಿ ಇವರ "Central Sector Scheme Scholarship for Colleges and University Students "ಗೆ ಅರ್ಜಿ ಸಲ್ಲಿಸಲು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ವಿವಿಧ ಕ್ಯಾಟಗರಿ, ಸಂಯೋಜನೆ ಮತ್ತು ಲಿಂಗವಾರು ಒಟ್ಟು 600 ಅಂಕಗಳಿಗೆ ನಿಗದಿಪಡಿಸಿರುವ ವಿವಿಧ ಹಂತದ Cutoff ಅಂಕಗಳನ್ನು ಅಥವಾ ಅದಕ್ಕಿಂತ ಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿಗಳು ಈ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಹಾಕಲು ಅರ್ಹರಾಗಿರುತ್ತಾರೆ.**

2016ನೇ ಸಾಲಿನಿಂದ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ (ಹೊಸ ಹಾಗೂ ನವೀಕರಣಗಳಿಗೆ) ಅರ್ಜಿ ಸಲ್ಲಿಸಲಿಚ್ಚಿಸುವ ವಿದ್ಯಾರ್ಥಿಗಳು ಕಡ್ಡಾಯವಾಗಿ ಆಧಾರ್ ನೋಂದಣಿ ಸಂಖ್ಯೆಯನ್ನು ಬ್ಯಾಂಕ್ ಖಾತೆಗೆ ಲಿಂಕ್ ಮಾಡಬೇಕಿರುತ್ತದೆ. ಆದಕಾರಣ, ಆಸಕ್ತ ವಿದ್ಯಾರ್ಥಿಗಳು ಆಧಾರ್ ನೋಂದಣಿ ಸಂಖ್ಯೆಯನ್ನು ಹೊಂದಿರಬೇಕು.

ಬಾಬು:ಜಿಪಿಆರ್.

# ಅರ್ಜಿ ಆಹ್ವಾನ

ಬೆಂಗಳೂರು, ಜುಲೈ 19 (ಕರ್ನಾಟಕ ವಾರ್ತೆ)

ಉದ್ಯೋಗ ಮತ್ತು ತರಬೇತಿ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ 258 ಸರ್ಕಾರಿ ತರಬೇತಿ ಸಂಸ್ಥೆಗಳು ಮತ್ತು 196 ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಆಗಸ್ಟ್ 2016 ರ ಅಂತಿಮ ಸುತ್ತು ಪ್ರವೇಶಕ್ಕಾಗಿ ಬಾಕಿ ಉಳಿದಿರುವ ವೃತ್ತಿ/ಘಟಕಗಳಲ್ಲಿ ಖಾಲಿ ಇರುವ ಸ್ಥಾನಗಳನ್ನು ಭರ್ತಿ ಮಾಡುವ ಸಲುವಾಗಿ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣ/ಅನುತ್ತೀಣರಾದ ಅಭ್ಯರ್ಥಿಗಳ ಪೈಕಿ ಆನ್‌ಲೈನ್ ಅರ್ಜಿ ಸಲ್ಲಿಸದೇ ಇರುವವರಿಗೆ, ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿದೆ. ಈ ಸುತ್ತಿನಲ್ಲಿ ಕೈಗಾರಿಕಾ ತರಬೇತಿ ಸಂಸ್ಥೆ ಹಾಗೂ ವೃತ್ತಿ ಆಯ್ಕೆ ಮಾಡಿಕೊಂಡು ಕೊಳ್ಳಲು ಅರ್ಜಿ ಸಲ್ಲಿಸಲು ಕೊನೆಯ ಜುಲೈ 24 ರಂದು ಸಂಜೆ 5-00 ಗಂಟೆಗೆ ಜುಲೈ 26 ರಂದು ಬೆಳಿಗ್ಗೆ 10.00 ಗಂಟೆಗೆ ಮೆರಿಟ್ ಆಧಾರದ ಮೇಲೆ ಬಾಕಿ ಉಳಿದಿರುವ ವೃತ್ತಿ/ಘಟಕಗಳಲ್ಲಿ ಖಾಲಿ ಇರುವ ಸ್ಥಾನಗಳಿಗೆ ಪ್ರವೇಶ ನೀಡಲಾಗುವುದು. ಎಲ್ಲಾ ಖಾಲಿ ಸ್ಥಾನಗಳು ಭರ್ತಿಯಾದ ನಂತರ ಪ್ರವೇಶ ಪ್ರಕ್ರಿಯೆಯನ್ನು ಮುಕ್ತಾಯಗೊಳಿಸಲಾಗುವುದು. ಈಗಾಗಲೇ ಆನ್-ಲೈನ್ ಅರ್ಜಿ ಸಲ್ಲಿಸಿರುವವರು ಸಹ ಪುನ: ಕಡ್ಡಾಯವಾಗಿ ಅರ್ಜಿ ಸಲ್ಲಿಸಬೇಕಾಗಿರುತ್ತದೆ. ಹೆಚ್ಚಿನ ವಿವರಗಳಿಗೆ ಹತ್ತಿರದ ಸರ್ಕಾರಿ/ಅನುದಾನಿತ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು ಸಂಪರ್ಕಿಸುವುದು.

ಬಾಬು:ಜಿಪಿಆರ್.

# ನ್ಯಾಯಾಲಯದ ಖಾಲಿ ಹುದ್ದೆಗೆ ಅರ್ಜಿ ಆಹ್ವಾನ

ಬೆಂಗಳೂರು, ಜುಲೈ 19 (ಕರ್ನಾಟಕ ವಾರ್ತೆ)

ಚಿತ್ರದುರ್ಗ ನ್ಯಾಯಾಂಗ ಘಟಕದಲ್ಲಿ ಖಾಲಿಯಿರುವ ಶೀಘ್ರಲಿಪಿಗಾರರು ಮತ್ತು ಬೆರಳಚ್ಚುಗಾರರು ತಲಾ ಒಂದು ಹುದ್ದೆ ಹಾಗೂ ಆದೇಶ ಜಾರಿಕಾರರು ಮತ್ತು ಜವಾನರ ತಲಾ ಎರಡು ಹುದ್ದೆಗಳ ನೇಮಕಾತಿಗೆ ನಿಗದಿತ ನಮೂನೆಯಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಆಗಸ್ಟ್ 20 ಕೊನೆಯ ದಿನವಾಗಿದೆ.

ಹೆಚ್ಚಿನ ವಿವರ ಹಾಗೂ ಅರ್ಜಿ ನಮೂನೆಗಳಿಗೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಚಿತ್ರದುರ್ಗ ಈ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ.

ಬಾಬು:ಜಿಪಿಆರ್.